# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ತಿಮ್ಲಾಪುರ ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ಅಡಿಯಲ್ಲಿ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ತುಮಕೂರು ರವರ ಪತ್ರ ಸಂಖ್ಯೆ:ತುಜಿಪ/ಅಭಿ/ವಿವ-03/ದೂರು/ತನಿಖೆ/172/2016-17, ದಿನಾಂಕ:08-08-2017.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:11-09-2017ರ ಕಾರಣ ಕೇಳುವ ನೋಟೀಸು.
3. ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ, ಸದಸ್ಯರು, ತಿಮ್ಲಾಪುರ ಗ್ರಾಮ ಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ದಿನಾಂಕ:03-10-2017 ಮತ್ತು 20-01-2018ರ ಲಿಖಿತ ಹೇಳಿಕೆ.
4. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್ ದಿನಾಂಕ:05-12-2017 ಮತ್ತು 22-12-2017.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ:08-08-2017ರ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ರವರ ಪ್ರಸ್ತಾವನೆಯಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕು ತಿಮ್ಲಾಪುರ ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ಕೋಂ ಡಿ.ಸುರೇಶ್ ಇವರು ಗ್ರಾಮ ಪಂಚಾಯತಿಯಲ್ಲಿ ಸುಳ್ಳು ದಾಖಲೆ ಸೃಷ್ಟಿಸಿ ಗ್ರಾಮ ಪಂಚಾಯತಿಯಿಂದ ಬಿಲ್ಲುಗಳನ್ನು ಪಡೆದಿರುತ್ತಾರೆ ಹಾಗೂ ಇವರ ಪತಿಯಾದ ಶ್ರೀ ಡಿ.ಸುರೇಶ್ ರವರು ಹಣಕಾಸಿನ ಹಿತಾಸಕ್ತಿಯೊಂದಿದ್ದು, ಗ್ರಾಮ ಪಂಚಾಯತಿಯಿಂದ ಕಾನೂನು ಬಾಹಿರವಾಗಿ ಚೆಕ್ ಮುಖಾಂತರ ಹಣವನ್ನು ಪಡೆದಿರುತ್ತಾರೆ.

ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ಇವರು ಗ್ರಾಮ ಪಂಚಾಯತಿಯಲ್ಲಿ ನಡೆಯುವ ಎಲ್ಲಾ ಸಾಮಾನ್ಯ ಮತ್ತು ವಿಶೇಷ ಸಭೆಗೆ ಹಾಜರಾಗಿ ಎಲ್ಲಾ ವಿಷಯಗಳ ಬಗ್ಗೆ ಚರ್ಚೆ ಮಾಡಿ ವಿಚಾರಗಳನ್ನು ಒಪ್ಪಿಕೊಂಡು ಹಾಜರಾತಿಯಲ್ಲಿ ಸಹಿ ಹಾಕಿದ್ದರೂ ಸಹ ಇವರ ಪತಿ ಶ್ರೀ ಡಿ.ಸುರೇಶ್ ಮುಖಾಂತರ ಮಾಹಿತಿ ಹಕ್ಕು ಅಧಿನಿಯಮದಡಿಯಲ್ಲಿ ಮಾಹಿತಿಯನ್ನು ಪಡೆದು ಗೊಂದಲವನ್ನು ಸೃಷ್ಟಿಮಾಡುವುದಲ್ಲದೇ ಗ್ರಾಮ ಪಂಚಾಯತಿ ಸಿಬ್ಬಂದಿ ಮತ್ತು ಸದಸ್ಯರುಗಳ ಮೇಲೆ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಾ ಗ್ರಾಮ ಪಂಚಾಯತಿಯ ಸುಗಮ ಆಡಳಿತಕ್ಕೆ ಅಡ್ಡಿಯನ್ನು ಉಂಟುಮಾಡಿರುತ್ತಾರೆ.

ಆದ್ದರಿಂದ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ರವರ ಸದಸ್ಯತ್ವವನ್ನು ವಜಾಗೊಳಿಸಲು ದಿನಾಂಕ:20-03-2017ರಂದು ನಡೆದ ವಿಶೇಷ ಸಭೆಯಲ್ಲಿ ತೀರ್ಮಾನಿಸಿ ಸದಸ್ಯತ್ವವನ್ನು ವಜಾಗೊಳಿಸಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚಿಕ್ಕನಾಯಕನಹಳ್ಳಿ ಇವರಿಗೆ ಮನವಿಯನ್ನು ಸಲ್ಲಿಸಿದ್ದು, ಕಾರ್ಯನಿರ್ವಾಹಕ ಅಧಿಕಾರಿಯವರು ಗ್ರಾಮ ಪಂಚಾಯತಿ ದಾಖಲೆಗಳನ್ನು ಪರಿಶೀಲಿಸಿ, ಗ್ರಾಮ ಪಂಚಾಯತಿ ಸದಸ್ಯರ ಪತಿಯಾದ ಶ್ರೀ ಡಿ.ಸುರೇಶ್ ರವರು ಗ್ರಾಮ ಪಂಚಾಯತಿಯ ಹಣವನ್ನು ಚೆಕ್ ರೂಪದಲ್ಲಿ ಪಡೆದಿರುತ್ತಾರೆ ಎಂದು ದಾಖಲಾತಿಗಳೊಂದಿಗೆ ವರದಿಯನ್ನು ಸಲ್ಲಿಸುತ್ತಾ, ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ಇವರ ಪತಿ ಹಣಕಾಸಿನ ಹಿತಾಸಕ್ತಿ ಹೊಂದಿರುವುದು ಕಂಡುಬಂದಿರುತ್ತದೆ. ಇದು ನಿಯಮ ಉಲ್ಲಂಘನೆಯಾಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ ಎಂದು ವರದಿಯನ್ನು ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ರವರು ಅಕ್ರಮವೆಸಗಿರುವುದು ಕಂಡು ಬಂದಿರುವುದರಿಂದ ಇವರ ಸದಸ್ಯತ್ವವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ 43(ಎ) ರಂತೆ ಕ್ರಮಕೈಗೊಳ್ಳಲು ವರದಿಯನ್ನು ಸಲ್ಲಿಸಿರುತ್ತಾರೆ.

2..

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅಪರ ಸಮಜಾಯಿಷಿ ಕೇಳಲಾಗಿತ್ತು.

ಈ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಸಲ್ಲಿಸಿರುವ ಉತ್ತರದಲ್ಲಿ "ಸದರಿ ಪತ್ರದಲ್ಲಿ ನಾನು ಮತ್ತು ನನ್ನ ಪತಿ ಡಿ.ಸುರೇಶ್ ನಮ್ಮ ಗ್ರಾಮದಲ್ಲಿ ಕೂಲಿ ಕೆಲಸ ಮಾಡಿ ಜೀವನ ನಡೆಸುತ್ತಿದ್ದೇವೆ. ನಮ್ಮ ಗ್ರಾಮ ಪಂಚಾಯತಿಗೆ ಸಂಬಂಧಿಸಿದ ಮೋಟಾರ್ ಪಂಪುಗಳನ್ನು ಎತ್ತುವುದು, ಹೊಡೆದು ಹೋದ ಪೈಪುಗಳನ್ನು ರಿಪೇರಿ ಮಾಡುವುದು, ಚರಂಡಿ ಸ್ವಚ್ಛಗೊಳಿಸುವ ಕೆಲಸವನ್ನು ನಮ್ಮ ಪತಿಯವರು ಮಾಡುತ್ತಿರುತ್ತಾರೆ. ಈ ಕೆಲಸಗಳಿಗೆ ಗ್ರಾಮ ಪಂಚಾಯತಿಯವರು ಸ್ಥಳ ಪರಿಶೀಲನೆ ಮಾಡಿ ಚೆಕ್ ಮೂಲಕ ನನ್ನ ಪತಿಯವರಿಗೆ ಹಣ ಸಂದಾಯ ಮಾಡಿರುತ್ತಾರೆ. ಸಾಕ್ಷಿಯಾಗಿ ನಮ್ಮ ಊರಿನ ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ದಯಾನಂದ್‌ರವರು ಹಾಜರಿರುತ್ತಾರೆ. ನನ್ನ ಪತಿಯವರಿಗೆ ಹಣ ನೀಡಲು ನಾನು ಶಿಫಾರಸ್ಸು ಮಾಡಿರುವುದಿಲ್ಲ. ಯಾವುದೇ ಸುಳ್ಳು ಬಿಲ್ಲು ಸೃಷ್ಟಿ ಮಾಡಿ ಹಣ ಪಡೆದಿರುವುದಿಲ್ಲ. ಶ್ರಮದಿಂದ ದುಡಿದು ಕೂಲಿ ಹಣವನ್ನು ಪಡೆದಿರುತ್ತಾರೆ. ನಾನು ಗ್ರಾಮ ಪಂಚಾಯತಿ ಸದಸ್ಯರಾಗಿದ್ದರೂ ಸಹ ಗ್ರಾಮ ಪಂಚಾಯತಿ ದಾಖಲೆಗಳನ್ನು ಪರಿಶೀಲಿಸಲು ಕೋರಿದಾಗ ಕಾರ್ಯದರ್ಶಿಗಳು ಕೊಡಲು ನಿರಾಕರಿಸಿರುತ್ತಾರೆ. ಮಾಹಿತಿ ಹಕ್ಕಿನಲ್ಲಿ ಅರ್ಜಿ ಸಲ್ಲಿಸಿ ಪಡೆಯಿರಿ ಎಂದು ಆದೇಶ ನೀಡಿರುತ್ತಾರೆ.

ಸದಸ್ಯತ್ವವನ್ನು ವಜಾಗೊಳಿಸುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ತುಮಕೂರು ರವರು ತಮಗೆ ವರದಿ ಸಲ್ಲಿಸುವ ಮುಂಚೆ ನನಗೆ ನೋಟೀಸ್ ನೀಡಿರುವುದಿಲ್ಲ ಮತ್ತು ನನ್ನಿಂದ ಯಾವುದೇ ಉತ್ತರ ಪಡೆದಿರುವುದಿಲ್ಲ. ನಾನು ನನ್ನ ಪತಿ ಗ್ರಾಮ ಪಂಚಾಯತಿ ಆಡಳಿತಕ್ಕೆ ಅಡ್ಡಿಯುಂಟು ಮಾಡಿರುವುದಿಲ್ಲ. ಈ ರೀತಿ ನನ್ನ ಗಂಡನ ಮೇಲೆ ಸುಳ್ಳು ಆರೋಪ ಮಾಡಿರುತ್ತಾರೆ. ಕಾಮಗಾರಿಗೆ ಸಂಬಂಧಿಸಿದಂತೆ ಮೇಲ್ವಿಚಾರಣೆ ಮಾಡಿ ಹಣ ಬಿಡುಗಡೆ ಮಾಡುವ ನಿಯಮವಿದ್ದು ಮೇಲ್ನೋಟಕ್ಕೆ ಅಧಿಕಾರಿಗಳು ಮತ್ತು ಅಧ್ಯಕ್ಷರು ಕರ್ತವ್ಯಲೋಪವೆಸಗಿರುತ್ತಾರೆ. ಗ್ರಾಮ ಪಂಚಾಯತಿಯಿಂದ ನನಗೆ ಹಣ ನೀಡಿದ ಬಗ್ಗೆಯಾಗಲೀ ಅಥವಾ ಹಣ ಪಡೆದ ಬಗ್ಗೆಯಾಗಲಿ ಯಾವುದೇ ರೀತಿಯ ಲಿಖಿತವಾದ ದಾಖಲಾತಿಗಳು ಇರುವುದಿಲ್ಲ. ಕಾಮಗಾರಿ ಅಥವಾ ಕೆಲಸದ ಬಗ್ಗೆ ಯಾವುದೇ ಕರಾರು ಮಾಡಿಕೊಂಡ ಬಗ್ಗೆ ಯಾವುದೇ ದಾಖಲಾತಿಗಳು ಇರುವುದಿಲ್ಲ. ಈ ಮೇಲ್ಕಂಡ ವಿಷಯವನ್ನು ಪರಿಶೀಲಿಸಿ ನ್ಯಾಯ ಮತ್ತು ಸಮತೆ ದೃಷ್ಟಿಯಿಂದ ನನ್ನನ್ನು ಆರೋಪದಿಂದ ಮುಕ್ತಗೊಳಿಸಬೇಕೆಂದು ಈ ಮೂಲಕ ಕೋರಿಕೊಂಡಿರುತ್ತಾರೆ".

ಮೇಲೆ ಓದಲಾದ (4)ರನ್ವಯ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ ಇವರ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿ:21-12-2017 ಮತ್ತು 20-01-2018 ರಂದು ಜರುಗಿದ ವಿಚಾರಣೆಯಲ್ಲಿ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ, ಆಪಾದಿತ ಸದಸ್ಯರು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚಿಕ್ಕನಾಯಕನಹಳ್ಳಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಿಮ್ಲಾಪುರ ಗ್ರಾಮ ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯತಿ ಅಧಿಕಾರಿಗಳು ಹಾಜರಿದ್ದರು. ಆಪಾದಿತ ಸದಸ್ಯರು ತಮ್ಮ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲೆಗಳನ್ನು ಹಾಗೂ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಸದರಿ ಆಪಾದಿತ ಸದಸ್ಯರು ತಾವು ಕೆಲಸ ಮಾಡಿ ಚೆಕ್ ತೆಗೆದುಕೊಂಡಿರುವುದಾಗಿ ತಿಳಿಸಿರುತ್ತಾರೆ. ಇದು ಕಾನೂನು ವಿರುದ್ಧವಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ತಿಮ್ಲಾಪುರ ಗ್ರಾಮ ಪಂಚಾಯತಿಯ ಸದಸ್ಯತ್ವ ರದ್ದುಪಡಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1001 ಗ್ರಾಪಂಅ 2017 ಬೆಂಗಳೂರು, ದಿನಾಂಕ:06-04-2018.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ, ಸದಸ್ಯರು, ತಿಮ್ಲಾಪುರ ಗ್ರಾಮ ಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ ರವರ ಪ್ರಕರಣದಲ್ಲಿ ತಾವು ಕೆಲಸ ಮಾಡಿ ಚೆಕ್ ತೆಗೆದುಕೊಂಡಿರುವುದಾಗಿ ಸದರಿ ಆಪಾದಿತ ಸದಸ್ಯರು ತಿಳಿಸಿರುತ್ತಾರೆ. ಇದು ಕಾನೂನು ವಿರುದ್ಧವಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ತಿಮ್ಲಾಪುರ ಗ್ರಾಮ ಪಂಚಾಯತಿಯ ಸದಸ್ಯತ್ವವನ್ನು ರದ್ದುಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/4

(ಮುಬಾರಕ್ ಅಹ್ಮದ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ:</u>**

1. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ತುಮಕೂರು, ತುಮಕೂರು ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಚಿಕ್ಕನಾಯಕನಹಳ್ಳಿ, ತುಮಕೂರು ಜಿಲ್ಲೆ.
4. ಶ್ರೀಮತಿ ಹೆಚ್.ಆರ್.ಗಾಯತ್ರಿದೇವಿ, ಸದಸ್ಯರು, ತಿಮ್ಲಾಪುರ ಗ್ರಾಮ ಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಿಮ್ಲಾಪುರ ಗ್ರಾಮ ಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಗಣಕ ಶಾಖೆ/ಕರ್ನಾಟಕ ವಿಕಾಸ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**<u>ಪ್ರತಿಯನ್ನು ಮಾಹಿತಿಗಾಗಿ:</u>**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.